கடிதம் வெண்றவா் தேசிய நாளிதழ்
తెలుగు జాతీయ దినపత్రిక అక్షర విజేత
ಅಕ್ಷರ ವಿಜೇತ
ನಿಜ ನಿರ್ಭಯ ನಿಷ್ಪಕ್ಷ ಎಡಿಟರ್: ಅನಿಲ್‌ಕುಮಾರ್
Saturday 30th August 2025 | RNI: TELTEL/2021/81079 | website: www.Vijethadaily.com

# ಓಣಂ ಪ್ರಯುಕ್ತ KSRTC ಯಿಂದ ಹೆಚ್ಚುವರಿ ಬಸ್‌ಗಳ ಸಂಚಾರ, ಟಿಕೆಟ್ ರಿಯಾಯಿತಿ! ವೇಳಾಪಟ್ಟಿ

**ಅಕ್ಷರ್ ವಿಜೇತ ,ಬೆಂಗಳೂರು :**

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ (KSRTC) ಇತ್ತೀಚೆಗೆ ಗಣೇಶ ಗಬ್ಬದ ಪ್ರಯುಕ್ತ ವಿಶೇಷ ಬಸ್‌ಗಳನ್ನು ಬಿಟ್ಟಿತ್ತು. ಇದೀಗ ತಿರು ಓಣಂ ಹಬ್ಬದ ಪ್ರಯುಕ್ತ ರಾಜ್ಯ ಸಾರಿಗೆ ನಿಗಮ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಬಸ್ ಕಾರ್ಯಾಚರಣೆ ಮಾಡುವುದಾಗಿ ತಿಳಿಸಿದೆ. ಎಲ್ಲಿಂದ ಎಲ್ಲಿಗೆ? ಬಸ್ ಮಾರ್ಗಗಳು, ಸಮಯ ದಿನಾಂಕದ ಪೂರ್ಣ ಮಾಹಿತಿ ಹೀಗಿದೆ.ಸೆಪ್ಟಂಬರ್ 05ರಂದು ತಿರು ಓಣಂ ಹಬ್ಬ ಜರುಗಲಿದೆ. ಈ ಸಂಬಂಧ ಪ್ರಯಾಣಿಕರಿಗೆ ಸಮರ್ಪಕ ಸಾರಿಗೆ ಒದಗಿಸುವ ಉದ್ದೇಶದಿಂದ ಸೆಪ್ಟಂಬರ್ 02 ರಿಂದ ಸೆಪ್ಟಂಬರ್ 04 ರವರೆಗೆ ಹೆಚ್ಚುವರಿ ಬಸ್‌ಗಳು ಸಂಚರಿಸಲಿವೆ. ಬೆಂಗಳೂರಿನಿಂದ ಕೇರಳ ರಾಜ್ಯದ ಈ ಕೆಳಕಂಡ ಸ್ಥಳಗಳಿಗೆ ಹಾಲಿ ಕಾರ್ಯಾಚರಿಸುತ್ತಿರುವ ಸಾರಿಗೆಗಳ ಜೊತೆಗೆ 90 ಹೆಚ್ಚುವರಿ ಬಸ್ಸುಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಲಾಗಿದೆ ಎಂದು ನಿಗಮದ ವ್ಯವಸ್ಥಾಪಕರು ಮಾಹಿತಿ ನೀಡಿದ್ದಾರೆ.

ಟಿಕೆಟ್ ಬುಕ್ಕಿಂಗ್ ಸುಲಭ, ಈ ಲಿಂಕ್ ನೋಡಿ ಆನ್‌ಲೈನ್ ಮೂಲಕ ಟಿಕೆಟ್ ಬುಕ್ ಮಾಡುವವರು ನಿಗಮದ ಈ ಅಧಿಕೃತ ವೆಬ್‌ಸೈಟ್ www.ksrtc.karnataka.gov.in ಮೂಲಕ ಸೀಟು ಕಾಯ್ದಿರಿಸಬಹುದು. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟು ಕಾಯ್ದಿರಿಸಿದಲ್ಲಿ ಶೇಕಡ 5 ರಷ್ಟು ರಿಯಾಯಿತಿ ಸಿಗಲಿದೆ. ಎರಡು ಬದಿಯ ಪ್ರಯಾಣದ ಟಿಕೆಟ್ ಅನ್ನು ಮುಂಗಡವಾಗಿ ಒಟ್ಟಿಗೆ ಕಾಯ್ದಿರಿಸಿದವರಿಗೆ ಟಿಕೆಟ್ ದರದಲ್ಲಿ ಶೇಕಡ 10 ರಷ್ಟು ರಿಯಾಯಿತಿ ಸಿಗಲಿದೆ ಎಂದು ತಿಳಿಸಿದ್ದಾರೆ.




## ಬಸ್ ಸಂಚಾರ ಮಾರ್ಗಗಳು ಯಾವುವು?

ಕೇರಳ ರಾಜ್ಯದ ವಿವಿಧ ಸ್ಥಳಗಳಿಂದ ಬೆಂಗಳೂರಿಗೆ ದಿನಾಂಕ 07.09.2025 ರಂದು ವಿಶೇಷ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಬೆಂಗಳೂರಿನ ಮೈಸೂರು ರಸ್ತೆ ಬಸ್ ನಿಲ್ದಾಣ ಹಾಗೂ ಶಾಂತಿನಗರ ಬಸ್ ನಿಲ್ದಾಣದಿಂದ ಕೇರಳ ರಾಜ್ಯಕ್ಕೆ ಅಂದರೆ ಕಣ್ಣೂರು, ಕೋಜಿಕೋಡ್, ಎರ್ನಾಕುಲಂ, ಪಾಲಕ್ಕಾಡ್, ತ್ರಿಶೂರ್, ಕೊಟ್ಟಾಯಂ, ತಿರುವನಂತಪುರಂ ಮುಂತಾದ ಸ್ಥಳಗಳಿಗೆ ವಿಶೇಷ ವಾಹನಗಳ ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿಷ್ಠಿತ ಸಾರಿಗೆಗಳನ್ನು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ಸಂಚರಿಸಲಿವೆ ಎಂದರು.ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗಿರುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್ ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸಬೇಕು.

## ಟಿಕೆಟ್ ಮೇಲೆ ಭರ್ಜರಿ ರಿಯಾಯಿತಿ

ನೆರೆ ರಾಜ್ಯಗಳಾದ ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ, ಕೇರಳ, ಗೋವಾ, ಮಹಾರಾಷ್ಟ್ರ ಹಾಗೂ ಪುದುಚೆರಿಯಲ್ಲಿ ಇರುವ ಪ್ರಮುಖ ನಗರಗಳಲ್ಲಿ ನಿಗಮದ ಮುಂಗಡ ಆಸನಗಳನ್ನು ಕಾಯ್ದಿರಿಸುವ ಕೌಂಟರ್‌ಗಳು ಇವೆ. ಅವುಗಳ ಮೂಲಕ ಮುಂಗಡ ಆಸನಗಳನ್ನು ಬುಕ್ ಮಾಡಬಹುದಾಗಿದೆ.ಕಾರ್ಯಾಚರಣೆ ಮಾಡಲಾಗುವ ಹೆಚ್ಚುವರಿ ಸಾರಿಗೆಗಳು, ಅವುಗಳು ಹೊರಡುವ ಸ್ಥಳ ಹಾಗೂ ವೇಳಾ ವಿವರಗಳನ್ನು ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅಂತರ್‌ಜಾಲ ವ್ಯವಸ್ಥೆಯಲ್ಲಿ ಹಾಗೂ KSRTC ನಿಗಮದ ವೆಬ್‌ಸೈಟ್‌ನಲ್ಲಿ ಸಾರ್ವಜನಿಕ ಮಾಹಿತಿಗಾಗಿ ಒದಗಿಸಲಾಗಿದೆ. ಸದರಿ ಹೆಚ್ಚುವರಿ ಸಾರಿಗೆಗಳಲ್ಲಿ ಸಂಚರಿಸುವ ಪ್ರಯಾಣಿಕರು ಕಾಯ್ದಿರಿಸುವ ಮುಂಗಡ ಚೀಟಿಗಳಲ್ಲೂ ಕೂಡ ವಾಹನ ಹೊರಡುವ ಸ್ಥಳದ ವಿವರ ನಮೂದಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಕೆಂಪಾಪುರದಲ್ಲಿ ಕೆಂಪೇಗೌಡರ ಸಮಾಧಿ ಅಭಿವೃದ್ಧಿಗೆ ಯೋಜನೆ:

# ಡಿಕೆ ಶಿವಕುಮಾರ್ ಮಹತ್ವದ ಮಾಹಿತಿ



ಕೆಂಪಾಪುರದಲ್ಲಿರುವ ಬೆಂಗಳೂರು ನಿರ್ಮಾತೃ ಕೆಂಪೇಗೌಡರ ಸಮಾಧಿಯನ್ನು ಅಭಿವೃದ್ಧಿಪಡಿಸಲು ಯೋಜನೆ ರೂಪಿಸಿದ್ದೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಈ ಬಗ್ಗೆ ಮಾಗಡಿ ಪಟ್ಟಣದಲ್ಲಿ ವಿವಿಧ ಇಲಾಖೆಯ ಕಾಮಗಾರಿಗಳ ಶಂಕುಸ್ಥಾಪನಾ ಸಮಾರಂಭದಲ್ಲಿ ಮಾತನಾಡಿದ್ದಾರೆ. ಮಾಗಡಿಯಲ್ಲಿ ಕೆಂಪೇಗೌಡರು ನಿರ್ಮಿಸಿದ ಐತಿಹಾಸಿಕ ಕೋಟೆ, ಸೋಮೇಶ್ವರ ದೇವಾಲಯ, ನಾಡಪ್ರಭು ಕೆಂಪೇಗೌಡರು ಕಟ್ಟಿರುವ ಐತಿಹಾಸಿಕ ಮಾಗಡಿ ಕೋಟೆಯ ಹಳೆಯ ವೈಭವವನ್ನು ಹಿಂದಿರುಗಿಸಲು, ಸಂರಕ್ಷಿಸಲು ಕೋಟೆಯ ಪುನರುಜ್ಜೀವನ ಕಾರ್ಯಕ್ಕಾಗಿ **103** ಕೋಟಿ ರೂಪಾಯಿ ಅನುದಾನವನ್ನು ಬೆಂಗಳೂರು ನಗರದಿಂದ ನೀಡಿದ್ದೇನೆ ಎಂದಿದ್ದಾರೆ.

## ಕರಾವಳಿಗೆ ರಣಮಳೆ ಮುನ್ಸೂಚನೆ

### ಇಂದು 8 ಜಿಲ್ಲೆಗಳಿಗೆ ಅಲರ್ಟ್, ಶಾಲೆಗಳಿಗೆ ರಜೆ ಘೋಷಣೆ




ಕರ್ನಾಟಕದಾದ್ಯಂತ ಅಬ್ಬರಿಸುತ್ತಿರುವ ಮುಂಗಾರು ಮಳೆಯು ಕರಾವಳಿಗೆ ಬಿಟ್ಟು ಬಿಡದೇ ಸುರಿಯಲಿದೆ. ಮುಂದಿನ ಒಂದು ವಾರಗಳ ಕಾಲ ರಾಜ್ಯದ ಕರಾವಳಿಗೆ ಭಾರೀ ವರುಣಾತಂಕ ಎದುರಾಗಿದೆ. ಮಲೆನಾಡು ಹಾಗೂ ಒಂದೆರಡು ಒಳನಾಡು ಜಿಲ್ಲೆಗಳಿಗೆ ಮುಂದಿನ ಎರಡು ದಿನ ಧಾರಕಾರ ಮಳೆ ನಿರೀಕ್ಷೆ ಇದೆ. ಆದರೆ ಕರಾವಳಿಗೆ ಗರಿಷ್ಠ **200** ಮಿಲಿ ಮೀಟರ್ ವರೆಗೆ ಬಿರುಗಾಳಿ ಸಹಿತ ಮಳೆ ಎಚ್ಚರಿಕೆ ನೀಡಲಾಗಿದೆ. ಇಂದು ಶನಿವಾರ ಶಾಲೆಗಳಿಗೆ ರಜೆ ನೀಡಲಾಗಿದೆ.




## 3,000 ಬಿಎಂಟಿಸಿ ಬಸ್‌ಗಳ ವೇಳಾಪಟ್ಟಿ ಪರಿಷ್ಕರಣೆ: ಮಾಹಿತಿ ಇಲ್ಲಿದೆ

ರಾಜ್ಯ ರಾಜಧಾನಿ ಬೆಂಗಳೂರು ಜೀವನಾಡಿ ಸಾರಿಗೆಗಳಲ್ಲಿ ಬಿಎಂಟಿಸಿ ಕೂಡ ಒಂದಾಗಿದೆ. ಪ್ರತಿದಿನ ಲಕ್ಷಾಂತರ ಮಂದಿ ಪ್ರಯಾಣಿಕರನ್ನು ಅವರು ತಲುಪಬೇಕಾದ ಗಮ್ಯಸ್ಥಾನಕ್ಕೆ ಹೊತ್ತೊಯ್ಯುತ್ತವೆ ಈ ಬಸ್‌ಗಳು. ಇನ್ನು ಇವುಗಳ ಚಾಲಕರು, ನಿರ್ವಾಕರಂತೂ ಕೆಲಸದ ಅವಧಿ ಮುಗಿಯುವವರೆಗೂ ಕೆಲ ಪ್ರಯಾಣಿಕರು ಕೊಡುವ ಕಾಟಗಳನ್ನೆಲ್ಲಾ ಸಹಿಸಿಕೊಂಡು ಕರ್ತವ್ಯ ನಿರ್ಹಿಸುತ್ತಲಿದ್ದಾರೆ. ಮತ್ತೊಂದೆಡೆ, ಕೆಲಸದ ಅವಧಿ ಕೂಡ ಹೆಚ್ಚಿದ್ದು, ಒತ್ತಡ ಬಿದ್ದಾಂತಾಗಿದೆ. ಇದೀಗ ಇದನ್ನು ತಪ್ಪಿಸಲು ಬಿಎಂಟಿಸಿ ಮಹತ್ವದ ನಿರ್ಧಾರವನ್ನು ತೆಗೆದುಕೊಂಡಿದೆ.

# ರೈಲ್ವೆ ಕಾಮಗಾರಿ, ಕರ್ನಾಟಕದಲ್ಲಿ ವಿವಿಧ ರೈಲುಗಳ ಸಂಚಾರ ಸೇವೆ ರದ್ದು

ಗಣೇಶ ಹಬ್ಬದ ಪ್ರಯುಕ್ತ ಪ್ರಯಾಣಿಕರಿಗೆ ಅನುಕೂಲವಾಲೆಂದು ಹಾಗೂ ದಟ್ಟಣೆ ಕಡಿಮೆ ಮಾಡಲು ವಿಶೇಷ ರೈಲುಗಳನ್ನು ವಿವಿಧ ಮಾರ್ಗಗಳಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಈ ಮಧ್ಯೆ ಬಳ್ಳಾರಿ ಮತ್ತು ತೋರಣಗಲ್ಲು ಯಾರ್ಡ್‌ಗಳಲ್ಲಿ ಥಿಕ್ ವೆಬ್ ಸ್ವಿಚ್‌ಗಳ ಕಾಮಗಾರಿಗಾಗಿ ಲೈನ್ ಬ್ಲಾಕ್ ಮಾಡಲಾಗುತ್ತಿದೆ. ಈ ತುರ್ತು ನಿರ್ವಹಣೆ ಪ್ರಯುಕ್ತ ಸೆಪ್ಟೆಂಬರ್ **03** ಈ ಕೆಳಗಿನ ರೈಲು ಸೇವೆಗಳಲ್ಲಿ ವ್ಯತ್ಯವಾಗಿದ್ದು, ಸಂಚಾರ ರದ್ದಾಗಿದೆ ಎಂದು **SWR** ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಮಂಜುನಾಥ ಕನಮಡಿ ಅವರು ತಿಳಿಸಿದ್ದಾರೆ.



## 3,000 ಬಿಎಂಟಿಸಿ ಬಸ್‌ಗಳ ವೇಳಾಪಟ್ಟಿ ಪರಿಷ್ಕರಣೆ: ಮಾಹಿತಿ ಇಲ್ಲಿದೆ

ಅಕ್ಷರ್ ವಿಜೀತ ,ಬೆಂಗಳೂರು :

Indergarh- ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಬಿಎಂಟಿಸಿ ಬಸ್‌ಗಳಿಂದ ಅಪಘಾತ ಮತ್ತು ಸಾವುಗಳ ಸಂಖ್ಯೆ ಹೆಚ್ಚಳ ಆಗುತ್ತಲಿದೆ. ಇದೀಗ ಈ ಬಗ್ಗೆ ಎಚ್ಚೆತ್ತುಕೊಂಡಿರುವ ಸಾರಿಗೆ ಸಂಸ್ಥೆ ಅಪಘಾತಗಳನ್ನು ನಿತಂತ್ರಣಕ್ಕೆ ತರಲು ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವತ್ತ ಗಮನಹರಿಸಿದೆ. ಚಾಲಕರ ಮೇಲಿನ ಒತ್ತಡ ಕಡಿಮೆಗೊಳಿಸಲು ಬಿಎಂಟಿಸಿ ಸುಮಾರು 3,000 ಬಸ್ ಮಾರ್ಗಗಳ ವೇಳಾಪಟ್ಟಿಯನ್ನ ಪರಿಷ್ಕರಣೆಗೊಳಿಸಿದೆ.ಚಾಲಕರ ಮೇಲಿನ ಒತ್ತಡದಿಂದಲೇ ಅಪಘಾತಗಳು ಸಂಭವಿಸುತ್ತಿವೆ ಎನ್ನುವ ಮಾತುಗಳು ಮೊದಲಿನಿಂದಲೂ ಕೇಳಿಬರುತ್ತಿವೆ. ಕೆಲಸದ ಸಮಯದಲ್ಲಿ ಬದಲಾವಣೆ ಇಲ್ಲದಿರುವುದು ಹಾಗೂ ಕರ್ತವ್ಯದ ಸಮಯಕ್ಕಿಂತ ಹೆಚ್ಚು ಕೆಲಸ ಮಾಡುತ್ತಿರುವುದರಿಂದ ಚಾಲಕರಿಗೆ ಒತ್ತಡ ಹೆಚ್ಚಾಗುವಂತೆ ಮಾಡಿದೆ ಎಂದು ಚಾಲಕರು ಹಾಗೂ ಕಾರ್ಮಿಕ ಸಂಘಟನೆಗಳ ಆರೋಪವಾಗಿದೆ.ಈ ಬಗ್ಗೆ ಕೆಎಸ್‌ಆರ್‌ಟಿಸಿ ಸಿಬ್ಬಂದಿ ಮತ್ತು ಕಾರ್ಮಿಕರ ಫೆಡರೇಶನ್‌ನ ಪ್ರಧಾನ ಕಾರ್ಯದರ್ಶಿ ವಿಜಯ ಭಾಸ್ಕರ್ ಮಾತನಾಡಿದ್ದಾರೆ. ಸಾರಿಗೆ ಕಾರ್ಮಿಕರನ್ನು ನಿಯಂತ್ರಿಸುವ 1961ರ ಮೋಟಾರ್ ಸಾರಿಗೆ ಕಾರ್ಮಿಕರ ಕಾಯ್ದೆ ಪ್ರಕಾರ ಚಾಲಕನಿಗೆ ಕೇವಲ ಎಂಟು ಗಂಟೆಗಳ ಕೆಲಸ ಮಾಡಿಸಬೇಕು. ಆದರೂ ಚಾಲಕರು ಅವರಿಗೆ ನಿಗದಿಪಡಿಸಿದ ಟ್ರಿಪ್‌ಗಳನ್ನು ಪೂರ್ಣಗೊಳಿಸಲು ಸುಮಾರು 12 ಗಂಟೆಗಳ ಕಾಲ ಕೆಲಸ ಮಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

## ಕೆಂಪಾಪುರದಲ್ಲಿ ಕೆಂಪೇಗೌಡರ ಸಮಾಧಿ ಅಭಿವೃದ್ಧಿಗೆ ಯೋಜನೆ:

ಅಕ್ಷರ್ ವಿಜೀತ ,ಬೆಂಗಳೂರು :

ಬೆಂಗಳೂರಿನ ಸುಮನಹಳ್ಳಿಯಲ್ಲಿ 5 ಎಕರೆ ಜಾಗದಲ್ಲಿ ಕೆಂಪೇಗೌಡ ಭವನ ನಿರ್ಮಿಸುವ ಕಾರ್ಯ ನಡೆಯುತ್ತಿದ್ದು, ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀನಿರ್ಮಲಾನಂದನಾಥ ಮಹಾಸ್ವಾಮೀಜಿ ಅವರು ಈ ಬಗ್ಗೆ ರೂಪುರೇಷೆ ಸಿದ್ಧಪಡಿಸಿ, ಚರ್ಚಿಸಿದ್ದಾರೆ. ಕೆಂಪೇಗೌಡರ ಋಣ ತೀರಿಸಲು ಮಾಗಡಿ ಅಭಿವೃದ್ಧಿಗೆ ನಾವು ಬದ್ಧ. ಮಾಗಡಿ ಕ್ಷೇತ್ರವನ್ನು ಅಭಿವೃದ್ಧಿಪಡಿಸಿ, ಕೆಂಪೇಗೌಡರ ಹೆಸರು ಶಾಶ್ವತವಾಗಿ ಉಳಿಸಲು ನಾವು ಬದ್ಧ ಎಂದು ಹೇಳಿದ್ದಾರೆ.ಇಂದು ಮಾಗಡಿ ಪಟ್ಟಣದಲ್ಲಿ 40 ಕೋಟಿ ರೂಪಾಯಿ ವೆಚ್ಚದಲ್ಲಿ ಎರಡು ಎಕರೆ ಜಾಗದಲ್ಲಿ 100 ಹಾಸಿಗೆ ಸಾಮರ್ಥ್ಯದ ಅತ್ಯಾಧುನಿಕ, ಸುಸಜ್ಜಿತ ಆಸ್ಪತ್ರೆ ನಿರ್ಮಾಣ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ ಹಾಗೂ ಉದ್ಘಾಟನಾ ಸಮಾರಂಭದಲ್ಲಿ ಡಿಕೆ ಶಿವಕುಮಾರ್ ಈ ವಿಚಾರ ಹಂಚಿಕೊಂಡಿದ್ದಾರೆ.

ಮಾಗಡಿಯಲ್ಲಿ 100 ಹಾಸಿಗೆಗಳ ಆಸ್ಪತ್ರೆ

ನಮ್ಮ ಸರ್ಕಾರದ ವತಿಯಿಂದ ಆರೋಗ್ಯ ಇಲಾಖೆಯಲ್ಲಿ ದೊಡ್ಡ ಕ್ರಾಂತಿಯಾಗಿದೆ. ಮಾಗಡಿಯಲ್ಲಿ ಅತ್ಯಾಧುನಿಕ ಆಸ್ಪತ್ರೆ ನಿರ್ಮಾಣ ಮಾಡಬೇಕು ಎನ್ನುವುದು ಹಲವು ದಿನಗಳ ಬೇಡಿಕೆಯಾಗಿತ್ತು. 41 ಕೋಟಿ ರೂ. ವೆಚ್ಚದಲ್ಲಿ, ಎರಡು ಎಕರೆ ಜಾಗದಲ್ಲಿ 100 ಹಾಸಿಗೆ ಸಾಮರ್ಥ್ಯದ ಆಸ್ಪತ್ರೆ ನಿರ್ಮಿಸುತ್ತಿದ್ದೇವೆ. ಸಾರಿಗೆ ಸಚಿವರಾಗಿರುವ ರಾಮಲಿಂಗಾರೆಡ್ಡಿ ಅವರು ಬಸ್ ನಿಲ್ದಾಣ ಹಾಗೂ ಡಿಪೋ ನಿರ್ಮಾಣ ಮಾಡಿಕೊಡುವುದಾಗಿ ವಾಗ್ದಾನ ಮಾಡಿದ್ದಾರೆ ಎಂದಿದ್ದಾರೆ.




## ಮಾಗಡಿಯ ಕೆರೆಗಳಿಗೆ ನೀರು ತುಂಬಿಸಲು 90 ಕೋಟಿ

20 ಕೋಟಿ ರೂಪಾಯಿ ವೆಚ್ಚದಲ್ಲಿ ಮಾಗಡಿಯ ಗೌರಮ್ಮನ ಕೆರೆ ಅಭಿವೃದ್ಧಿ ಪಡಿಸಲು ಯೋಜನೆ ರೂಪಿಸಲಾಗಿದೆ. 159 ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಘೋಷಿಸಿದ್ದೇವೆ. 1200 ಜನರಿಗೆ ಇ-ಸ್ವತ್ತು ವಿತರಿಸಲಾಗಿದೆ. ಇನ್ನುಳಿದವರಿಗೆ ಶೀಘ್ರದಲ್ಲೇ ವಿತರಿಸಲು ಸಿದ್ಧತೆ ನಡೆಸಲಾಗಿದೆ. 13 ಕೋಟಿ ರೂಪಾಯಿ ವೆಚ್ಚದಲ್ಲಿ ಮಂಚನಬೆಲೆ ಬಳಿ ಹಲವು ಅಭಿವೃದ್ಧಿ ಕೆಲಸಗಳನ್ನು ಆರಂಭಿಸುತ್ತಿದ್ದು 90 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಮಾಗಡಿಯ ಕೆರೆಗಳಿಗೆ ನೀರು ತುಂಬಿಸುವ ಮಹತ್ವದ ಯೋಜನೆಯನ್ನು ಕೈಗೆತ್ತಿಕೊಂಡಿದ್ದೇವೆ ಎಂದು ಮಾಹಿತಿ ನೀಡಿದ್ದಾರೆ.ನಾನು ಇಂಧನ ಸಚಿವನಾಗಿದ್ದ ಸಂದರ್ಭದಲ್ಲಿ ಹೆಚ್‌ವಿಡಿಎಸ್ ಯೋಜನೆಯಡಿ ರೈತರಿಗೆ ವಿದ್ಯುತ್ ಪರಿವರ್ತಕಗಳನ್ನು ನೀಡಿರುವುದು ಒಂದು ದಾಖಲೆಯಾಗಿ ಉಳಿದಿದೆ. ರೈತರಿಗೆ ಟ್ರಾನ್ಸ್‌ಫಾರ್ಮರ್ ಒದಗಿಸುವ ಯೋಜನೆ ದೇಶದಲ್ಲಿ ಯಾವುದೇ ಲೋಕಸಭಾ ಕ್ಷೇತ್ರದಲ್ಲಿಯೂ ಮಾಡಲಾಗದ ಯೋಜನೆಯನ್ನ ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ನಾವು ಮಾಡಿದ್ದೇವೆ ಎಂದು ಸಂತೋಷವಾಗುತ್ತದೆ. ಮಾಗಡಿ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ನಾವು ಸದಾ ಬದ್ಧರಾಗಿರುತ್ತೇವೆ ಎಂದು ಡಿಕೆ ಶಿವಕುಮಾರ್ ಭರವಸೆ ನೀಡಿದ್ದಾರೆ.

## ಕರಾವಳಿಗೆ ರಣಮಳೆ ಮುನ್ಸೂಚನೆ

ಮುಂಗಾರಿನ ಮೂರು ತಿಂಗಳು (ಜೂನ್-ಆಗಸ್ಟ್) ಕಳೆದಿದ್ದೇವೆ. ಮುಂದಿನ ಒಂದು ತಿಂಗಳು ಸಹ ಉತ್ತಮ ಮಳೆ ಸಾಧ್ಯತೆ ಇದೆ. ಬೆಂಗಳೂರು, ಶಿವಮೊಗ್ಗ, ಹಾವೇರಿ, ಧಾರವಾಡ, ಬೆಳಗಾವಿ, ದಾವಣಗೆರೆ, ಉತ್ತರ ಕನ್ನಡ, ಉಡುಪಿ, ಚಾಮರಾಜನಗರ ಸೇರಿದಂತೆ ಅನೇಕ ಜಿಲ್ಲೆಗಳಲ್ಲಿ ಮಳೆ ಮುಂದುವರಿದಿದೆ. ಇಂದು ಶನಿವಾರ ಒಟ್ಟು **08** ಜಿಲ್ಲೆಗಳಿಗೆ ಭಾರೀ ಮಳೆ ಎಚ್ಚರಿಕೆ ನೀಡಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.ಇಂದು ಮತ್ತು ನಾಳೆ ಉಡುಪಿ, ಉತ್ತರ ಕನ್ನಡ ಹಾಗೂ ದಕ್ಷಿಣ ಜಿಲ್ಲೆಗಳಲ್ಲಿ ರಣ ಮಳೆ ಸುರಿಯಲಿದ್ದು, ಆರೆಂಜ್ ಅಲರ್ಟ್ ನೀಡಲಾಗಿದೆ. ಒಳನಾಡಿನ ಬೆಳಗಾವಿ, ಧಾರವಾಡ, ಚಿಕ್ಕಮಗಳೂರು, ಕೊಡಗು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಇವತ್ತು ಗರಿಷ್ಠ **115** ಮಿಲಿ ಮೀಟರ್ ಮಳೆ ಸಂಭವವಿದೆ. ಈ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ. ಇನ್ನುಳಿದಂತೆ ರಾಜ್ಯದ ಇತರ ಜಿಲ್ಲೆಗಳಲ್ಲಿ ಸಾಧಾರಣ ಮಳೆ ಆಗಬಹುದು.ಹವಾಮಾನದಲ್ಲಿನ ನಿರಂತರ ಬದಲಾವಣೆಗಳು ಆಗುತ್ತಿವೆ. ಸದ್ಯ ಚಂಡಮಾರುತ ಪ್ರಸರಣವು ಬಂಗಾಳಕೊಲ್ಲಿಯ ನೈಋತ್ಯ ಭಾಗದಲ್ಲಿ ಸಂಭವಿಸಿದೆ. ಇದರಿಂದ ಕರ್ನಾಟಕದ ಬೆಂಗಳೂರು, ಕೋಲಾರ, ಚಿಕ್ಕಮಗಳೂರು, ರಾಮನಗರ, ಚಿತ್ರದುರ್ಗ, ದಾವಣಗೆರೆ, ಬೆಳಗಾವಿ, ಹಾವೇರಿ, ಹಾಸನ ಹೀಗೆ ರಾಜ್ಯದ ಬಹುತೇಕ ಎಲ್ಲ ಭಾಗಗಳಲ್ಲಿ ಉತ್ತಮ ಮಳೆ ಆಗುತ್ತಿದೆ. ಸೋಮವಾರದಿಂದ ಒಳನಾಡಿನಲ್ಲಿ ಮಳೆ ಕೊಂಚ ಕಡಿಮೆ ಆಗುವ ಲಕ್ಷಣಗಳು ಗೋಚರಿಸಿವೆ.

ಭಾರೀ ಮಳೆಗೆ ಶಾಲೆಗಳಿಗೆ ರಜೆ ಘೋಷಣೆ

ಕರ್ನಾಟಕ ಕರಾವಳಿ ಹಾಗೂ ಮಲೆನಾಡಿನಗೆ ಮಳೆ ಅಬ್ಬರ ಮುಂದುವರಿಯಲಿದೆ. ಇಂದು ಸಹ ಚಿಕ್ಕಮಗಳೂರಿಗೆ ಭಾರೀ ಮಳೆ ಕಾರಣಕ್ಕೆ ಯೆಲ್ಲೋ ಅಲರ್ಟ್ ನೀಡಲಾಗಿದೆ. ಮಳೆ ಮಾಹಿತಿ ಅರಿತ ಜಿಲ್ಲಾಡಳಿತವು ಶಾಲೆಗಳು ಮತ್ತು ಅಂಗನವಾಡಿಗಳಿಗೆ ಶನಿವಾರವು ರಜೆ ಘೋಷಿಸಿದೆ. ಶುಕ್ರವಾರ ರಜೆ ನೀಡಲಾಗಿತ್ತು. ಅದೀಗ ಮುಂದುವರಿದಿದೆ. ಸೋಮವಾರದಿಂದ ಎಂದಿನಂತೆ ಶಾಲೆಗಳು ತೆರೆಯುವ ಸಾಧ್ಯತೆ ಇದೆ.ಇನ್ನೂ ಉಡುಪಿ, ಮಂಗಳೂರು, ದಕ್ಷಿಣ ಕನ್ನಡ, ಶಿವಮೊಗ್ಗ ಭಾಗಗಳಲ್ಲಿ ಮುಂದಿನ ಎರಡು ದಿನಗಳಲ್ಲಿ ಮಳೆ ಹೆಚ್ಚಾದರೆ ಮುಂದಿನ ವಾರ ಮತ್ತೆ ಆಯಾ ಜಿಲ್ಲೆಗಳ ಶಾಲೆಗಳಿಗೆ ಮಳೆ ರಜೆ ಘೋಷಣೆ ಆಗುವ ಸಂಭವವೂ ಇದೆ. ಮಕ್ಕಳ ರಕ್ಷಣೆ, ಹಿತದೃಷ್ಟಿಯಿಂದ ಜಿಲ್ಲಾಧಿಕಾರಿಗಳು ಈ ನಿರ್ಧಾರ ಕೈಗೊಳ್ಳುತ್ತಾರೆ.

ಬೆಂಗಳೂರಿನಲ್ಲಿ ಸಾಮಾನ್ಯ ಮಳೆ, ಚಳಿ

ರಾಜಧಾನಿಯಲ್ಲಿ ಮುಂದಿನ ಮೂರು ದಿನಗಳ ಕಾಲ ಇದೇ ರೀತಿ ಹಗುರ ಮಳೆ ಹಾಗೂ ತಂಪು ವಾತಾವರಣ ಸ್ಥಿತಿ ಮುಂದುವರಿಯಲಿದೆ. ಮಬ್ಬು ಕವಿದ ವಾತಾವರಣದ ಸ್ಥಿತಿ ಕಂಡು ಬರಲಿದೆ. ನಗರದಲ್ಲಿ ಗರಿಷ್ಠ ತಾಪಮಾನ **28-27** ಮತ್ತು ಕನಿಷ್ಠ ತಾಪಮಾನ **20** ಡಿಗ್ರಿ ಸೆಲ್ಸಿಯಸ್ ದಾಖಲಾಗುವ ನಿರೀಕ್ಷೆ ಇದೆ ಎಂದು ಹವಾಮಾನ ಇಲಾಖೆ ಬೆಂಗಳೂರು ಕೇಂದ್ರ ಮಾಹಿತಿ ನೀಡಿದೆ.

## ರೈಲ್ವೆ ಕಾಮಗಾರಿ, ಕರ್ನಾಟಕದಲ್ಲಿ ವಿವಿಧ ರೈಲುಗಳ ಸಂಚಾರ ಸೇವೆ ರದ್ದು




ಗಣೇಶ ಹಬ್ಬದ ಪ್ರಯುಕ್ತ ಪ್ರಯಾಣಿಕರಿಗೆ ಅನುಕೂಲವಾಲೆಂದು ಹಾಗೂ ದಟ್ಟಣೆ ಕಡಿಮೆ ಮಾಡಲು ವಿಶೇಷ ರೈಲುಗಳನ್ನು ವಿವಿಧ ಮಾರ್ಗಗಳಲ್ಲಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಈ ಮಧ್ಯೆ ಬಳ್ಳಾರಿ ಮತ್ತು ತೋರಣಗಲ್ಲು ಯಾರ್ಡ್‌ಗಳಲ್ಲಿ ಥಿಕ್ ವೆಬ್ ಸ್ವಿಚ್‌ಗಳ ಕಾಮಗಾರಿಗಾಗಿ ಲೈನ್ ಬ್ಲಾಕ್ ಮಾಡಲಾಗುತ್ತಿದೆ. ಈ ತುರ್ತು ನಿರ್ವಹಣೆ ಪ್ರಯುಕ್ತ ಸೆಪ್ಟೆಂಬರ್ 03 ಈ ಕೆಳಗಿನ ರೈಲು ಸೇವೆಗಳಲ್ಲಿ ವ್ಯತ್ಯವಾಗಿದ್ದು, ಸಂಚಾರ ರದ್ದಾಗಿದೆ ಎಂದು SWR ಮುಖ್ಯ ಸಾರ್ವಜನಿಕ ಸಂಪರ್ಕಾಧಿಕಾರಿ ಮಂಜುನಾಥ ಕನಮಡಿ ಅವರು ತಿಳಿಸಿದ್ದಾರೆ.

ಗಣೇಶ ಹಬ್ಬ ಮುಗಿಸಿ ಮುಂದಿನ ವಾರ ಮರಳಿ ಬರುವವರಿಗೆ, ದೈನಂದಿನ ರೈಲು ಪ್ರಯಾಣಿಕರಿಗೆ ಈ ರದ್ದಾದ ರೈಲು ಸೇವೆಗಳನ್ನು ಗಮನಿಸಿ ಪ್ರಯಾಣವನ್ನು ಪ್ಲಾನ್ ಮಾಡಿಕೊಳ್ಳಬೇಕು. ಯಾವೆಲ್ಲ ಮಾರ್ಗದ ರೈಲುಗಳು ರದ್ದಾಗಿವೆ ಎಂಬ ಪಟ್ಟಿ ಮುಂದಿದೆ.

ರದ್ದಾದ ರೈಲುಗಳ ಪಟ್ಟಿ, ಮಾರ್ಗಗಳು

* ಗಂತಕಲ್ - ಚಿಕ್ಕಜಾಜೂರು ಪ್ಯಾಸೆಂಜರ್ ರೈಲು (ಸಂಖ್ಯೆ 57415) & ಚಿಕ್ಕಜಾಜೂರು-ಗಂತಕಲ್ ಪ್ಯಾಸೆಂಜರ್ (57416) ಮತ್ತು ಹೊಸಪೇಟೆ - ಬಳ್ಳಾರಿ ಡೆಮು ವಿಶೇಷ (07397) ರೈಲುಗಳ ಸಂಚಾರವು ಸೆಪ್ಟೆಂಬರ್ 3, 2025 ರಂದು ಸಂಚಾರವನ್ನು ರದ್ದುಗೊಳಿಸಲಾಗಿದೆ.ಸೆಪ್ಟೆಂಬರ್ 2 ರಂದು ತಿರುಪತಿಯಿಂದ ಹೊರಡುವ ತಿರುಪತಿ - ಕದಿರಿದೇವರಪಲ್ಲಿ ಪ್ಯಾಸೆಂಜರ್ ರೈಲು (57405) ಗಂತಕಲ್ ಮತ್ತು ಕದಿರಿದೇವರಪಲ್ಲಿ ನಡುವೆ ಸ್ಥಗಿತಗೊಂಡಿದೆ. ಇದು ಗಂತಕಲ್‌ನಲ್ಲಿ ತನ್ನ ಪ್ರಯಾಣವನ್ನು ಕೊನೆಗೊಳಿಸಲಿದೆ ಎಂದು ರೈಲ್ವೆ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಸೆಪ್ಟೆಂಬರ್ 3 ರಂದು ಕದಿರಿದೇವರಪಲ್ಲಿಯಿಂದ ಹೊರಡಬೇಕಿದ್ದ ರೈಲು (57406) ಕದಿರಿದೇವರಪಲ್ಲಿ - ತಿರುಪತಿ ಪ್ಯಾಸೆಂಜರ್ ರೈಲು ಸಂಚಾರವನ್ನು ಕದಿರಿದೇವರಪಲ್ಲಿ ಮತ್ತು ಗಂತಕಲ್ ಮಧ್ಯೆ ರದ್ದುಗೊಳಿಸಲಾಗಿದೆ. ಇದು ತನ್ನ ನಿಗದಿತ ಸಮಯಕ್ಕೆ ಕದಿರಿದೇವರಪಲ್ಲಿಯ ಬದಲಾಗಿ ಗಂತಕಲ್‌ನಿಂದ ತನ್ನನ್ನು ಪ್ರಾರಂಭಿಸಲಿದೆ. ಬಳ್ಳಾರಿಯಿಂದ ಹೊರಡಬೇಕಿದ್ದ ಬಳ್ಳಾರಿ - ದಾವಣಗೆರೆ ಡೆಮು ವಿಶೇಷ ರೈಲು (07395) ಬಳ್ಳಾರಿ ಮತ್ತು ಸೆಪ್ಟೆಂಬರ್ ಹೊಸಪೇಟೆ ನಡುವೆ ರದ್ದುಗೊಂಡಿದೆ. ಇದು ತನ್ನ ನಿಗದಿತ ಸಮಯಕ್ಕೆ ಬಳ್ಳಾರಿಯ ಬದಲಾಗಿ ಹೊಸಪೇಟೆಯಿಂದ ತನ್ನ ಪ್ರಯಾಣ ಆರಂಭಿಸಲಿದೆ.ಬಳ್ಳಾರಿಯಿಂದ ಹೊರಡಬೇಕಿದ್ದ ಬಳ್ಳಾರಿ - ದಾವಣಗೆರೆ ಡೆಮು ವಿಶೇಷ ರೈಲು (07395) ಬಳ್ಳಾರಿ ಮತ್ತು ಸೆಪ್ಟೆಂಬರ್ ಹೊಸಪೇಟೆ ನಡುವೆ ರದ್ದುಗೊಂಡಿದೆ. ಇದು ತನ್ನ ನಿಗದಿತ ಸಮಯಕ್ಕೆ ಬಳ್ಳಾರಿಯ ಬದಲಾಗಿ ಹೊಸಪೇಟೆಯಿಂದ ತನ್ನ ಪ್ರಯಾಣ ಆರಂಭಿಸಲಿದೆ. ಸೆಪ್ಟೆಂಬರ್ 3 ರಂದು ಸಂಚರಿಸುವ ಎಸ್‌ಎಸ್‌ಎಸ್ ಹುಬ್ಬಳ್ಳಿ - ಗಂತಕಲ್ ಪ್ಯಾಸೆಂಜರ್ ರೈಲು (ಸಂಖ್ಯೆ 56911) ಮುನಿರಾಬಾದ್ ಮತ್ತು ಗಂತಕಲ್ ನಡುವೆ ಸಂಚಾರ ರದ್ದುಗೊಂಡಿದೆ. ಇದು ಮುನಿರಾಬಾದ್‌ನಲ್ಲಿ ತನ್ನ ಪ್ರಯಾಣ ಅಂತ್ಯಗೊಳಿಸಲಿದೆ. ಸೆಪ್ಟೆಂಬರ್ 3 ರಂದು ಗುಂತಕಲ್ ನಿಂದ ಹೊರಡಬೇಕಿದ್ದ ಗುಂತಕಲ್-SSS ಹುಬ್ಬಳ್ಳಿ ಪ್ಯಾಸೆಂಜರ್ ರೈಲು

(56912) ಗುಂತಕಲ್ ಮತ್ತು ಮುನಿರಾಬಾದ್ ನಡುವೆ ರದ್ದುಗೊಳಿಸಲಾಗಿದೆ. ಇದು ಗುಂತಕಲ್ ಬದಲಾಗಿ ಮುನಿರಾಬಾದ್‌ನಿಂದ ತನ್ನ ನಿಗದಿತ ಸಮಯಕ್ಕೆ ಪ್ರಯಾಣ ಆರಂಭಿಸಲಿದೆ.ಇನ್ನೂ ಸೆಪ್ಟೆಂಬರ್ 3 ರಂದು ಹೊರಡುವ SSS ಹುಬ್ಬಳ್ಳಿ - ತಿರುಪತಿ ಪ್ಯಾಸೆಂಜರ್ ರೈಲು (57402) ಮಾರ್ಗ ಮಧ್ಯೆ 90 ನಿಮಿಷಗಳು ಕಾಲ ವಿಳಂಬವಾಗಿ ಸಂಚಾರ ಮಾಡಲಿದೆ ಎಂದು ನೈಋತ್ಯ ರೈಲ್ವೆಯು ಪ್ರಕಟಣೆಯಲ್ಲಿ ತಿಳಿಸಿದೆ.